MVC No. 335/2025 - -

PW - 1

ದಿನಾಂಕಃ 19.08.2026 ರಂದು ಸಾಕ್ಷಿಗೆ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ 3 ನೇ ಎದುರುದಾರರ ಪರ ಕೆ ಬಿ ಎಸ್ ವಕೀಲರಿಂದ -

ತಾಃ 28.11.2015 ರಂದು ಬೆಂಗಳೂರಿನಿಂದ ದಾವಣಗೆರೆಗೆ ಕೆಎ 17 ಬಿ 3848 ಇಂಡಿಕಾ ಕಾರಿನಲ್ಲಿ ಬೆಂಗಳೂರಿಗೆ ಹೊಗುತ್ತಿದ್ದೆನು ಸದರಿ ಕಾರನ್ನು ಯಲ್ಲಪ್ಪ ಚಾಲನೆ ಮಾಡುತ್ತಿದ್ದರು. ಸದರಿ ಕಾರು ಹಿರಿಯೂರಿನ ಬ ್ಲರ್ ಸಿಂಗ್ ಡಾಬಾ ಬಳಿ ಅಪಘಾತವಾಯಿತು. ಸದರಿ ಕಾರು ಚಾಲಕ ಕಾರನ್ನು ಅತೀ ವೇಗವಾಗಿ ಚಾಲನೆ ಮಾಡಿಕೊಂಡು ಹೋಗಿ ತೆಗ್ಗಿಗೆ ಕಾರನ್ನು ಕೆಡವಿದ್ದರಿಂದ ಅಪಘಾತವಾಗಿದೆ. ಯಾವುದೇ ಅಪಘಾತವಾಗದೇ ಇದ್ದರೂ ಸಹ ಪರಿಹಾರ ಪಡೆಯುವ ಸಲುವಾಗಿ ಪೊಲೀಸ್ ದಾಖಲೆಗಳನ್ನು ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಬಗ್ಗೆ ನಾನೇ ದೂರು ನೀಡಿರುತ್ತೇನೆ. ನಾನು ಪದವಿ ವ್ಯಾಸಂಗ ಮಾಡಿದ್ದೇನೆ. ದೂರನ್ನು ಸಿದ್ದಪ್ಪ ಎಂಬುವವರು ನೀಡಿದ್ದಾರೆ ಎಂದರೆ ಸರಿ. ಸದರಿ ದುರನ್ನು ತಾಃ 29.11.2015 ರಂದು ಮದ್ಯಾಹ್ನ 3.00 ಕ್ಕೆ ಕೊಡಲಾಗಿದೆ.

ಅಪಘಾತವಾದ ಕೂಡಲೇ ನಾವು ಚಿತ್ರದುರ್ಗದ ಜಿಲ್ಲಾಸ್ಪತ್ರೆಗೆ ಹೋಗಿ ಪ್ರಥಮ ಚಿಕಿತ್ಸೆ ಪಡೆದಿರುತ್ತೇನೆ. ನಾನು ಆಸ್ಪತ್ರೆಗೆ ಹೋದಾಗ ಪ್ರಜ್ಞೆ ಇರಲಿಲ್ಲ. ಅಪಘಾತವಾದ ಸಮಯದಲ್ಲಿ ನನ್ನ ಸ್ನೇಹಿತ ಬಸವರಾಜ ಇದ್ದನು. ನನ್ನನ್ನು ಅಂಬುಲೆನ್ಸ ನಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೋದರು. ಅಪಘಾತದ ಬಗ್ಗೆ ವೈದ್ಯರಿಗೆ ನಾನು ಹೇಳಿಲ್ಲ. ಏಕೆಂದರೆ ನನಗೆ ಪ್ರಜ್ಞೆ ಇರಲಿಲ್ಲ. ನಾನು ವೈದ್ಯರಿಗೆ ನಮ್ಮ ಕಾರಿಗೆ ಲಾರಿ ಡಿಕ್ಕಿಪಡಿಸಿದೆ ಎಂದು ಮಾಹಿತಿ ನೀಡಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಲಾರಿ ಸಿಗದೇ ಇದ್ದ ಕಾರಣ ಈ ಕಾರನ್ನು ಈ ಕೇಸಿನಲ್ಲಿ ಸೇರಿಸಿ ಪೊಲೀಸ್ ದಾಖಲೆಗಳನ್ನು ಸೃಷ್ಟಿಸಿ ಸುಳ್ಳು ಅರ್ಜಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತದ ಪೂರ್ವದಲ್ಲಿ ಹೇಗೆ ಕೆಲಸ ಮಾಡುತ್ತಿದ್ದೆನೋ ಇಂದಿಗೂ ಹಾಗೆ ಕೆಲಸ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಗಾಯದ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಅಂಶಗಳು ಸತ್ಯವಾಗಿವೆ. ನನ್ನ ಗಾಯದ ಪ್ರಮಾಣ ಪತ್ರದಲ್ಲಿ ಲಾರಿ ಅಪಘಾತಪಡಿಸಿರುತ್ತದೆ ಎಂದು ನಮೂದಾಗಿದ್ದರೂ ಸಹ ನಾನು ಪೊಲೀಸ್ ದಾಖಲೆಗಳನ್ನು ಸೃಷ್ಟಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನನಗೆ ಸಾಮಾನ್ಯ ಸ್ವರೂಪದ ಗಾಯಗಳಾದ ಕಾರಣ ನನ್ನನ್ನು ಅದೇ ದಿನ ಚಿತ್ರದುರ್ಗ ಸರ್ಕಾರಿ ಆಸ್ಪತ್ರೆಯಲ್ಲಿ ಬಿಡುಗಡೆ ಮಾಡಿ ಕಳಿಸಿರುತ್ತಾರೆ ಎಂದರೆ ಸರಿಯಲ್ಲ. ಚಿತ್ರದುರ್ಗ ಸರ್ಕಾರಿ ಆಸ್ಪತ್ರೆಯ ವೈದ್ಯರು ನನ್ನನ್ನು ಹೆಚ್ಚಿನ ಚಿಕಿತ್ಸೆಗೆ ಬೇರೆ ಆಸ್ಪತ್ರೆಗೆ ಹೋಗುವಂತೆ ಬರವಣಿಗೆ ಮಾಡಿಲ್ಲ ಎಂದರೆ ಸರಿ. City Central Hospital ನ ಲ್ಲಿ ನಾನು ಯಾವುದೇ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. 1.00 ಲಕ್ಷ ಖರ್ಚಾಗಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದ ಪೂರ್ವದಲ್ಲಿ ಏನು ಕೆಲಸ ಮಾಡುತ್ತಿದ್ದೆನೋ ಇಂದೂ ಅದೇ ಕೆಲಸ ಮಾಡುತಿತದ್ದೇನೆ ಎಂದರೆ ಸರಿಯಲ್ಲ. ನಾನು ಅಕೌಂಟೆಂಟ್ ಆಗಿ ಕೆಲಸ ಮಾಡುತ್ತಿದ್ದೇನೆ ಎಂದು ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ತಿಂಗಳಿಗೆ 50 ಸಾವಿರ ಸಂಪಾದನೆ ಮಾಡುತ್ತಿದ್ದ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿ. ಕೆಎ 17 ಬಿ 3848 ಕಾರು ಅಪಪಘಾತಕ್ಕೀಡಾಗಿಲ್ಲ ಎಂದರೆ ಸರಿಯಲ್ಲ. ಕಾಲ ಮೀರಿ ಅರ್ಜಿ ಸಲ್ಲಿಸಿರುವ ಕಾರಣ 2 ನೇ ಎದುರುದಾರರು ಪರಿಹಾರ ನೀಡಲು ಬಾಧ್ಯರಲ್ಲ ಎಂದರೆ ಸರಿಯಲ್ಲ.

ಅಪಘಾತವಾದ ಸಮಯದಲ್ಲಿ ಈ ಕಾರನ್ನು ಯಲ್ಲಪ್ಪ ಎಂಬುವವರು ಚಾಲನೆ ಮಾಡುತಿದ್ದರು. ದೂರಿನಲ್ಲಿ ಅಜಯಕುಮಾರ್ ಕಾರು ಚಾಲನೆ ಮಾಡುತ್ತಿದ್ದ ಎಂದು ನಮೂದಾಗಿದೆ ಎಂದರೆ ಸರಿ. ಯಲ್ಲಪ್ಪ ಹಾಗೂ ಅಜಯಕುಮಾರ್ ಇಬ್ಬರೂ ಒಬ್ಬರೇ ಎಂದು ತೋರಿಸಲು ನ್ಯಾಯೂಲಯಕ್ಕೆ ದಾಖಲಾತಿ ಹಾಜರುಪಡಿಸಿದ್ದೇನೆ.

ನಾನು ಹಾಜರುಪಡಿಸಿರುವ ದಾಖಲೆಗಳಲ್ಲಿ ಯಲ್ಲಪ್ಪ ಹಾಗೂ ಅಜಯಕುಮಾರ್ ಒಂದೇ ಎಂದು ಎಲ್ಲಿಯೂ ನಮೂದಾಗಿಲ್ಲ ಎಂದರೆ ಸರಿಯಲ್ಲ. ನಾನು ದಾಖಲೆಗಳನ್ನು ಸೃಷ್ಟಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಬಹಿರಂಗ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ
ನ್ಯಾಯಾಲಯ, ದಾವಣಗೆರೆ